ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ತೋಟಗಾರಿಕೆ ಇಲಾಖೆಯ ತೋಟಗಳಲ್ಲಿ ಖಾಯಂ/ ಗುತ್ತಿಗೆ ನೌಕರರ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

932(1115) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಗೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೋಟಗಾರಿಕೆ ಇಲಾಖೆಯ ತೋಟಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಹಾಗೂ ಗುತ್ತಿಗೆ ಆಧಾರದ ನೌಕರರ ಸಂಖ್ಯೆ ಎಷ್ಟು ;

(ಆ) ಇವರುಗಳಿಗೆ ನೀಡಲಾಗುತ್ತಿರುವ ಮಾಸಿಕ ವೇತನವೆಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಗುತ್ತಿಗೆ ನೌಕರರಿಗೆ ಸಕಾಲದಲ್ಲಿ ವೇತನವನ್ನು ನೀಡಲಾಗುತ್ತಿದೆಯೇ;

(ಈ) ಖಾಲಿ ಇರುವ ಹುದ್ದೆಗಳೆಷ್ಟು ; (ವರ್ಗವಾರು ವಿವರ ನೀಡುವುದು)

(ಉ) ಗುತ್ತಿಗೆ ನೌಕರರನ್ನು ಖಾಯಂಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಊ) ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿಮಾಡಲಾಗುವುದು ?